ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE: 3/2/2021

# ಗಣಿಬಾಧಿತ ಪ್ರದೇಶಗಳಿಗೆ ₹21000 ಕೋಟಿ: ನಿರಾಣಿ

3/2/21

## ಸುಪ್ರೀಂ ಸಮ್ಮತಿ ಪಡೆದು ಅಭಿವೃದ್ಧಿಗೆ ಬಳಕೆ

• **ಕನ್ನಡಪ್ರಭ ವಾರ್ತೆ** ವಿಧಾನ ಪರಿಷತ್

ರಾಜ್ಯದಲ್ಲಿ ಗಣಿಗಾರಿಕೆಯಿಂದ ಬಾಧಿತ ಪ್ರದೇಶಗಳ ಪರಿಸರ ಅಭಿವೃದ್ಧಿ ಸಂಬಂಧ 18 ಸಾವಿರ ಕೋಟಿ ರು. ರಾಜಧನ ಹಾಗೂ ಮೂರು ಕೋಟಿ ರು. ಬಡ್ಡಿ ಸೇರಿ 21 ಸಾವಿರ ಕೋಟಿ ರು.ಗಳನ್ನು ಸುಪ್ರೀಂ ಕೋರ್ಟ್ ಉಸ್ತುವಾರಿಯಲ್ಲಿ ವೆಚ್ಚ ಮಾಡಬೇಕಾಗಿದೆ. ಈ ಬಗ್ಗೆ ಕೋರ್ಟ್ ಮುಂದೆ ಪ್ರಸ್ತಾವನೆ ಮಂಡಿಸಿ 3 ತಿಂಗಳೊಳಗೆ ಈ ಮೊತ್ತ ಬಳಕೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ಗಣಿ ಮತ್ತು ಭೂ ವಿಜ್ಞಾನ ಸಚಿವ ಮುರುಗೇಶ್ ನಿರಾಣಿ ಹೇಳಿದರು.

ಜೆಡಿಎಸ್‌ನ ಕಾಂತರಾಜ್ ಅವರ ಪರವಾಗಿ ಬಸವರಾಜ ಹೊರಟ್ಟಿ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ಗಣಿಗಾರಿಕೆ ನಡೆಸುವ ಪ್ರದೇಶಗಳ ಪರಿಸರ ಸಂರಕ್ಷಣೆ, ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ಗಣಿಗಾರಿಕೆ ಗುತ್ತಿಗೆ ಪಡೆದ ಸಂಸ್ಥೆಗಳಿಂದ ಸಂಗ್ರಹಿಸಲಾದ ರಾಜಧನ ಮೊತ್ತ 18 ಸಾವಿರ ಕೋಟಿ ರು.ಗಳಾಗಿದ್ದು, ಈ ಮೊತ್ತದಿಂದ 3 ಕೋಟಿ ರು ಬಡ್ಡಿ ಬಂದಿದೆ. ಈ ಹಣವನ್ನು ಬಳಸಿಕೊಳ್ಳುವ ಬಗ್ಗೆ ಅಡ್ವೋಕೇಟ್ ಜನರಲ್ ಜೊತೆ ಚರ್ಚಿಸಿ, ಮುಂದಿನ ವಾರ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರ ಜೊತೆ ಚರ್ಚಿಸಲಾಗುವುದು. 3 ತಿಂಗಳೊಳಗೆ ಹಣ ಬಳಕೆಗೆ ಕ್ರಮ ಕೈಗೊಳ್ಳಲಾಗುವುದು ಎಂದರು.

ಗಣಿ ಬಾಧಿತ ಪ್ರದೇಶಗಳಲ್ಲಿ ವಿವಿಧ ಅಭಿವೃದ್ಧಿ ಕಾರ್ಯ ಮಾಡಲು ರಚಿಸಲಾಗಿರುವ ಜಿಲ್ಲಾ ಖನಿಜ ಪ್ರತಿಷ್ಠಾನ ಟ್ರಸ್ಟ್ ಮೂಲಕ ಅನುದಾನ ಹಂಚಿಕೆ ಮಾಡುವ ಸಮಯದಲ್ಲಿ ಪರಿಷತ್ ಸದಸ್ಯರಿಗೆ ತಾರತಮ್ಯ ಮಾಡುವುದಿಲ್ಲ ಎಂದು ಸಚಿವರು ಭರವಸೆ ನೀಡಿದರು.